ದಿನಾಂಕ : 06.07.2022 ಓ.ಎಸ್ ನಂ.79/2016 ರಲ್ಲಿ
ಪಿ.ಡಬ್ಲ್ಯೂ-1(ನಾಗರಾಜಪ್ಪ)

ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ನಮ್ಮ ಕುಟುಂಬದ ವಂಶವೃಕ್ಷವನ್ನು ನಿಪಿ-1, ಪಹಣಿ ಪತ್ರಿಕೆಯನ್ನು ನಿಪಿ-2, ಎಂ.ಆರ್ ನಂ.129/1997-98 ರ ಯಥಾ ನಕಲನ್ನು ನಿಪಿ-3, ದಿನಾಂಕ 23.06.2016 ರ 2 ಕ್ರಯದ ಕರಾರು ಪತ್ರಗಳ ದೃಢೀಕೃತ ನಕಲುಗಳನ್ನು ಕ್ರಮವಾಗಿ ನಿಪಿ-4 ಮತ್ತು ನಿಪಿ-5, 2 ಕೈಬರಹದ ಪಹಣಿ ಪತ್ರಿಕೆಗಳ ಯಥಾ ನಕಲುಗಳನ್ನು ಕ್ರಮವಾಗಿ ನಿಪಿ-6 ಮತ್ತು ನಿಪಿ-7, ದಿನಾಂಕ 10.04.2017 ರ ವಿಭಾಗಪತ್ರದ ದೃಢೀಕೃತ ನಕಲನ್ನು ನಿಪಿ-8, ಸ್ವೀಕೃತಿಯನ್ನು ನಿಪಿ-9, 4 ಫೋಟೋಗಳನ್ನು ಒಟ್ಟಾಗಿ ನಿಪಿ-10, ಅವುಗಳಿಗೆ ಸಂಬಂಧಿಸಿದ ಸಿ.ಡಿ. ಯನ್ನು ನಿಪಿ-11, ಸ್ಟುಡಿಯೋ ಬಿಲ್ಲನ್ನು ನಿಪಿ-12 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಸರಸ್ವತಿ ಕೆ.ಎನ್.)
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.